# ತುಮಕೂರು ವಿಶ್ವವಿದ್ಯಾನಿಲಯ

ಪರೀಕ್ಷಾ ಭವನ, ಬಿ.ಹೆಚ್. ರಸ್ತೆ, ತುಮಕೂರು-572 103 ☎:0816 - 2255650,2273511 ಫ್ಯಾಕ್ಸ್:0816-2270719


ಸಂಖ್ಯೆ:ತುವಿ:ಪವಿ:2026-27/386 ದಿನಾಂಕ:10.07.2026

## : ಸುತ್ತೋಲೆ :

**ತುರ್ತು**

ವಿಷಯ : ವಿವಿಧ ಸ್ನಾತಕ ಪದವಿಗಳ ಆರನೇ ಸೆಮಿಸ್ಟರ್‌ನ ದಿ:15.07.2026 ರ ಬುಧವಾರದಂದು ನಡೆಯಲಿರುವ INTERNSHIP ಪತ್ರಿಕೆಗಳಿಗೆ ಸಂಬಂಧಿಸಿದ್ದರ ಕುರಿತು.

* * * * *

ತುಮಕೂರು ವಿಶ್ವವಿದ್ಯಾನಿಲಯದ 2025-26 ನೇ ಶೈಕ್ಷಣಿಕ ಸಾಲಿನ ವಿವಿಧ ಸ್ನಾತಕ ಪದವಿಗಳ ಆರನೇ ಸೆಮಿಸ್ಟರ್‌ನ ಕೆಲವು ವಿಷಯಗಳ **INTERNSHIP ಪತ್ರಿಕೆಗಳ** ಪರೀಕ್ಷೆಗಳು **ದಿನಾಂಕ:15.07.2026 ರ ಬುಧವಾರದಂದು ಮಧ್ಯಾಹ್ನ 2.00 ರಿಂದ 4.00 ರವರೆಗೆ** ನಡೆಯಲಿದ್ದು, **INTERNSHIP** ಪತ್ರಿಕೆಗಳ ಪ್ರಶ್ನೆಪತ್ರಿಕೆಗಳನ್ನು ಈಗಾಗಲೇ ತಮ್ಮ ಪರೀಕ್ಷಾ ಕೇಂದ್ರಕ್ಕೆ ರವಾನಿಸಲಾಗಿದೆ.

ಆಯಾ ಕಾಲೇಜುಗಳ ಪ್ರಾಂಶುಪಾಲರು ತಮ್ಮ ಕಾಲೇಜಿನಲ್ಲಿ **INTERNSHIP** ಪತ್ರಿಕೆ ಆಯ್ದುಕೊಂಡಿರುವ **ವಿದ್ಯಾರ್ಥಿಗಳ ಹೆಸರು ಹಾಗೂ ನೋಂದಣಿ ಸಂಖ್ಯೆ ವಿವರಗಳನ್ನು ವಿಷಯವಾರು ಪಟ್ಟಿ** ಮಾಡಿ ತಮ್ಮ ಕಾಲೇಜು ಸಂಯೋಜನೆಗೊಂಡ ಪರೀಕ್ಷಾ ಕೇಂದ್ರದ ಪರೀಕ್ಷಾ ಮುಖ್ಯ ಅಧೀಕ್ಷಕರಿಗೆ **ದಿನಾಂಕ:13.07.2026** ರೊಳಗಾಗಿ ಸಲ್ಲಿಸುವುದು.

ಆಯಾ ಪರೀಕ್ಷಾ ಕೇಂದ್ರಗಳ ಮುಖ್ಯ ಅಧೀಕ್ಷಕರು ತಮ್ಮ ಪರೀಕ್ಷಾ ಕೇಂದ್ರಕ್ಕೆ ಸಂಯೋಜನೆಗೊಂಡ ಕಾಲೇಜುಗಳಿಂದ **INTERNSHIP** ಪತ್ರಿಕೆ ಆಯ್ದುಕೊಂಡಿರುವ ವಿದ್ಯಾರ್ಥಿಗಳ ಹೆಸರು ಹಾಗೂ ನೋಂದಣಿ ಸಂಖ್ಯೆ ವಿವರಗಳನ್ನು ವಿಷಯವಾರು ಪಟ್ಟಿ ಪಡೆದು, ಸದರಿ ವಿದ್ಯಾರ್ಥಿಗಳಿಗೆ ಪರೀಕ್ಷೆಗಳನ್ನು ಆಫ್‌ಲೈನ್ (CBCS ಮಾದರಿಯಲ್ಲಿ) ಮುಖಾಂತರ ನಡೆಸಿ, ಪರೀಕ್ಷೆ ಮುಗಿದ ನಂತರ ಆಫ್‌ಲೈನ್ ಬಂಡಲ್ ಮಾಡಿ ವಿದ್ಯಾರ್ಥಿಗಳ ಹಾಜರಾತಿ ವಹಿಯೊಂದಿಗೆ ಪರೀಕ್ಷಾ ವಿಭಾಗಕ್ಕೆ ಕಳುಹಿಸುವ ಸಂಬಂಧ ಅಗತ್ಯ ಕ್ರಮವಹಿಸುವಂತೆ ಈ ಮೂಲಕ ಸೂಚಿಸಲಾಗಿದೆ.

ಸದರಿ ಪರೀಕ್ಷೆಗಳಿಗೆ ಸಂಬಂಧಿಸಿದಂತೆ ಯಾವುದೇ ಗೊಂದಲಗಳಿದ್ದಲ್ಲಿ ಕೂಡಲೇ ಪರೀಕ್ಷಾ ವಿಭಾಗವನ್ನು ಸಂಪರ್ಕಿಸುವುದು.

ಉಪಕುಲಸಚಿವರು(ಪರೀಕ್ಷಾಂಗ)
ಉಪಕುಲ ಸಚಿವರು (ಮೌಲ್ಯಮಾಪನ)
ತುಮಕೂರು ವಿಶ್ವ ವಿದ್ಯಾಲಯ
ತುಮಕೂರು

ಗೆ,

1. ಪ್ರಾಂಶುಪಾಲರು / ಪರೀಕ್ಷಾ ಮುಖ್ಯ ಅಧೀಕ್ಷಕರು, ಎಲ್ಲಾ ಸ್ನಾತಕ ಪದವಿ ಪರೀಕ್ಷಾ ಕೇಂದ್ರಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಪ್ರಾಂಶುಪಾಲರುಗಳು, ಘಟಕ / ಎಲ್ಲಾ ಸಂಯೋಜಿತ ಸ್ನಾತಕ ಪದವಿ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

ಪ್ರತಿಗಳು :

1. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು - ಇಂದೇ ವಿಶ್ವವಿದ್ಯಾನಿಲಯದ **ಅಂತರ್ಜಾಲದಲ್ಲಿ ಪ್ರಕಟಿಸುವುದು.**
2. ಫಲಿತಾಂಶ ಗಣಕೀಕರಣ ವಿಭಾಗ, ಪರೀಕ್ಷಾ ಭವನ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಕಛೇರಿ ಪ್ರತಿ.